**ಸಾಕ್ಷಿಯನ್ನು ದಿಃ 19.02.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ.

ಅರ್ಜಿದಾರರಿಗೆ ಸಂಬಂಧಿಸಿದ ಕೇಸ್ ಶೀಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ. 21 ಎಂದು,

ಒಂದು Psychological Assessment Report ನ್ನು ಹಾಜರುಪಡಿಸಿದ್ದು ಅದನ್ನು ನಿಪಿ. 22 ಎಂದು,

ಒಟ್ಟು 5 ಎಕ್ಸ್ ರೇ ಫಿಲಂಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 23 ಎಂದು,

ಇತ್ತೀಚಿನ ಹೊರರೋಗಿ ದಾಖಲೆಯನ್ನು ಹಾಜರು ಪಡಿಸಿದ್ದು ನಿಪಿ. 24 ಎಂದು ಗುರುತಿಸಲಾಯಿತು.

**ಪಾಟೀ ಸವಾಲು – 1 ಮತ್ತು 2 ನೇ ಎದುರುದಾರರ ವಕೀಲರಿಂದ**

1 ಮತ್ತು 2 ನೇ ಎದುರುದಾರರು ಹಾಗೂ ಅವರ ಪರ ವಕೀಲರನ್ನು ಕೂಗಿ ಕರೆಯಿಸಲಾಗಿ ಗೈರು ಹಾಜರಿದ್ದು, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/–

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.